ದಿ**: 07-03-2026 ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರ ಶ್ರೀ ವಿ.ಡಿ.ಸಿ ವಕೀಲರಿಂದ :**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು ಇಂದು ನನ್ನ ಮೌಖಿಕ ಸಾಕ್ಷದ ಬದಲು ಈ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ಸರಿ ಮತ್ತು ನಿಜ ಇರುತ್ತವೆ. ಅವುಗಳನ್ನು ತಿಳಿದುಕೊಂಡು ನಾನು ಹೆಬ್ಬೆಟ್ಟಿನ ಸಹಿ ಹಾಕಿರುತ್ತೇನೆ.

ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

1. ಖಾನಾಪುರ ಗ್ರಾಮದ ಜಮೀನಿನ ಸರ್ವೆ ನಂಬರ್ 146 ರ 04 ಕೈ ಬರಹದ ಪಹಣಿಗಳನ್ನು ಕ್ರಮವಾಗಿ ನಿಪಿ 1 ರಿಂದ 4 ಎಂದು ಗುರುತಿಸಲಾಯಿತು.

2. 02 ಕೈ ಬರಹದ ಮುಟೇಶನ್‌ಗಳನ್ನು ನಿಪಿ-5 ಮತ್ತು ನಿಪಿ-6 ಎಂದು ಗುರುತಿಸಲಾಯಿತು.

3. ದಿನಾಂಕ 13-05-1986 ರ ಕ್ರಯಪತ್ರದ ದೃಢೀಕೃತ ನಕಲನ್ನು ನಿಪಿ-7 ಎಂದು ಗುರುತಿಸಲಾಯಿತು.

4. ಖಾನಾಪುರ ಗ್ರಾಮದ ಜಮೀನಿನ ಸರ್ವೆ ನಂಬರ್ 146 ರ 01 ಕಂಪ್ಯೂಟರ್ ಪಹಣಿಯನ್ನು ನಿಪಿ 8 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಯರು ಏಕತರ್ಫಿಯಾಗಿರುವುದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.**

(ಸಾಕ್ಷಿಯು ನೀಡಿರುವ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ**/-**

ಸಿವಿಲ್ ಜಡ್ಜ್ & ಜೆ.ಎಂ.ಎಫ್.ಸಿ.

ದೇವದುರ್ಗ